ಆ) ಹಾಗಿದ್ದಲ್ಲಿ, ಈ ಪ್ರಾಥಮಿಕ ಕೇಂದ್ರಗಳನ್ನು ಎಂದಿನಿಂದ ವರ್ಗಾವಣೆ ಮಾಡಲಾಗುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಹೌದು.

ಆ) ದಿನಾಂಕ:4–10–2007ರ ಸರ್ಕಾರಿ ಆದೇಶದಲ್ಲಿ ತುಮಕೂರು ಜಿಲ್ಲೆಯ ತುರುವೇಕೆರೆ ತಾಲ್ಲೂಕಿನ ಕೊಂಡಜ್ಜಿ ಮತ್ತು ಆನೇಕೆರೆ ಗ್ರಾಮಗಳಿಗೆ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಲಾಗಿತ್ತು. ಸದರಿ ಆದೇಶದಲ್ಲಿ ವಿಧಿಸಿದ್ದ ಷರತ್ತುಗಳ ಪ್ರಕಾರ, ರೂ. 1 ಲಕ್ಷ ವಂತಿಗೆ, 2 ಎಕರೆ ಜಮೀನು ಹಾಗೂ ತಾತ್ಕಾಲಿಕ ಕಟ್ಟಡವನ್ನು ಉಚಿತವಾಗಿ ಸ್ಥಳೀಯರು ನೀಡಬೇಕಿತ್ತು. ನಿಗದಿತ ಅವಧಿಯೊಳಗೆ ಸದರಿ ಷರತ್ತುಗಳನ್ನು ಪೂರೈಸದ ಕಾರಣ, ಮೇಲ್ಕಂಡ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಂಜೂರಾತಿಯನ್ನು ದಿನಾಂಕ:21–8–2010 ರ ಸರ್ಕಾರಿ ಆದೇಶದಲ್ಲಿ ರದ್ದುಪಡಿಸಲಾಗಿದೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಸೌಲಭ್ಯಗಳು

161 (119) ಶ್ರೀ ಮುನಿರಾಜು ಎಸ್. (ದಾಸರಹಳ್ಳಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದ ಯಾವ ಯಾವ ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಸೌಲಭ್ಯವು ಲಭ್ಯವಿರುತ್ತದೆ ಮತ್ತು ಡಯಾಲಿಸಿಸ್‌ಗೆ ವಿಧಿಸುತ್ತಿರುವ ದರವೆಷ್ಟು;

ಆ) ರಾಜ್ಯದ ಇತರೆ ಖಾಸಗಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್‌ಗೆ ವಿಧಿಸುತ್ತಿರುವ ದರವೆಷ್ಟು; ಆಸ್ಪತ್ರೆವಾರು ವಿವರ ನೀಡುವುದು;

ಇ) ಬಡ ರೋಗಿಗಳಿಗಾಗಿ ಕಡಿಮೆ ದರದಲ್ಲಿ ಡಯಾಲಿಸಿಸ್ ಸೌಲಭ್ಯವು ದೊರಕುವಂತಾಗಲು ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲು ಸರ್ಕಾರವು ಕ್ರಮ ಕೈಗೊಂಡಿದೆಯೇ;

ಈ) ಹಾಗಿದ್ದಲ್ಲಿ, ಯಾವ ಯಾವ ಸರ್ಕಾರಿ ಆಸ್ಪತ್ರೆಗಳಲ್ಲಿ ಬಡ ರೋಗಿಗಳಿಗಾಗಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲಾಗಿದೆ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಸೌಲಭ್ಯ ಲಭ್ಯವಿರುವ ಆಸ್ಪತ್ರೆಗಳ ಪಟ್ಟಿಯನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ಪ್ರತಿ ಡಯಾಲಿಸಿಸ್‌ಗೆ ಬಡತನ ರೇಖೆಗಿಂತ ಕೆಳಗಿರುವ ರೋಗಿಗಳಿಗೆ ರೂ. 250/– ರಂತೆ ಮತ್ತು ಎ.ಪಿ.ಎಲ್. ರೋಗಿಗಳಿಗೆ ರೂ.500/– ರಂತೆ ಶುಲ್ಕ ವಿಧಿಸಲಾಗುತ್ತಿದೆ.

ಆ) ಇಲಾಖೆಯ ಅಧಿಕಾರಿಗಳನ್ನು ಕೆಲವು ಖಾಸಗಿ ಆಸ್ಪತ್ರೆಗಳಿಗೆ ನಿಯೋಜಿಸಿ ಪರಿಶೀಲಿಸಲಾಗಿ, ಖಾಸಗಿ ಆಸ್ಪತ್ರೆಗಳಲ್ಲಿ ಪ್ರತಿ ಡಯಾಲಿಸಿಸ್‌ಗೆ ರೂ. 1,000ಗಳಿಂದ ರೂ. 1200ರವರೆಗೆ ಶುಲ್ಕ ವಿಧಿಸಲಾಗುತ್ತಿದೆ ಎಂದು ತಿಳಿದು ಬಂದಿದೆ. ಆದರೆ, ಆಸ್ಪತ್ರೆವಾರು ವಿವರಗಳು ಲಭ್ಯವಿರುವುದಿಲ್ಲ.

ಇ) ಸರ್ಕಾರಿ ಆಸ್ಪತ್ರೆಗಳಲ್ಲಿ ಪ್ರತಿ ಡಯಾಲಿಸಿಸ್‌ಗೆ ಬಡತನ ರೇಖೆಗಿಂತ ಕೆಳಗಿರುವ ರೋಗಿಗಳಿಗೆ ರೂ.250/– ರಂತೆ ಶುಲ್ಕ ವಿಧಿಸುವ ಮೂಲಕ ಚಿಕಿತ್ಸೆ ನೀಡಲಾಗುತ್ತಿದೆ.

ಈ) ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಅನುಬಂಧ

ರಾಜ್ಯದ ಜಿಲ್ಲಾ ಆಸ್ಪತ್ರೆ ಮತ್ತು ಸಾರ್ವಜನಿಕ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಕೇಂದ್ರಗಳ ವಿವರ

ಕ್ರ.ಸಂ.	ಆಸ್ಪತ್ರೆಗಳ ವಿವರ
1	ಜಿಲ್ಲಾ ಆಸ್ಪತ್ರೆ, ಬಾಗಲಕೋಟೆ
2	ಜಿಲ್ಲಾ ಆಸ್ಪತ್ರೆ, ಬಿಜಾಪುರ
3	ಜಿಲ್ಲಾ ಆಸ್ಪತ್ರೆ, ಕಾರವಾರ
4	ಜಿಲ್ಲಾ ಆಸ್ಪತ್ರೆ, ಚಿಕ್ಕಮಗಳೂರು
5	ಜಿಲ್ಲಾ ಆಸ್ಪತ್ರೆ, ಚಾಮರಾಜನಗರ
6	ಜಿಲ್ಲಾ ಆಸ್ಪತ್ರೆ, ಚಿತ್ರದುರ್ಗ
7	ಜಿಲ್ಲಾ ಆಸ್ಪತ್ರೆ, ಕೋಲಾರ
8	ಜಿಲ್ಲಾ ಆಸ್ಪತ್ರೆ, ತುಮಕೂರು

9	ಜಿಲ್ಲಾ ಆಸ್ಪತ್ರೆ, ಚಿಕ್ಕಬಳ್ಳಾಪುರ
10	ಜಿಲ್ಲಾ ಆಸ್ಪತ್ರೆ, ಗದಗ
11	ಜಿಲ್ಲಾ ಆಸ್ಪತ್ರೆ, ಧಾರವಾಡ
12	ಜಿಲ್ಲಾ ಆಸ್ಪತ್ರೆ, ಉಡುಪಿ
13	ಕೆ. ಸಿ. ಜನರಲ್ ಆಸ್ಪತ್ರೆ, ಬೆಂಗಳೂರು
14	ಸಾರ್ವಜನಿಕ ಆಸ್ಪತ್ರೆ, ಜಯನಗರ, ಬೆಂಗಳೂರು
ಸದರಿ ಡಯಾಲಿಸಿಸ್ ಕೇಂದ್ರಗಳು ಮಂಜೂರಾಗಿದ್ದು ಬುನಾಧೀಕರಣ ವ್ಯವಸ್ಥೆಯಲ್ಲಿದೆ.	
15	ಜಿಲ್ಲಾ ಆಸ್ಪತ್ರೆ, ರಾಮನಗರ
16	ಸಾರ್ವಜನಿಕ ಆಸ್ಪತ್ರೆ, ಹೊಸಪೇಟೆ, ಬಳ್ಳಾರಿ ಜಿಲ್ಲೆ
17	ಸಾರ್ವಜನಿಕ ಆಸ್ಪತ್ರೆ, ಶಿಕಾರಿಪುರ, ಶಿವಮೊಗ್ಗ ಜಿಲ್ಲೆ

ರಾಯಚೂರು ಜಿಲ್ಲೆಯಲ್ಲಿ ದಿನದ 24 ಗಂಟೆ ವಿದ್ಯುತ್ ವಿತರಣೆ

163 (260) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು): ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಸರ್ಕಾರವು ರಾಯಚೂರು ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಿಗೆ ದಿನದ 24 ಗಂಟೆ ವಿದ್ಯುತ್ ವಿತರಣೆ ಮಾಡಲು ಕ್ರಮ ಕೈಗೊಂಡಿದೆ; ತಾಲ್ಲೂಕುವಾರು ವಿವರಗಳನ್ನು ನೀಡುವುದು;

ಆ) ಈ ಯೋಜನೆಯಲ್ಲಿ ಸಿಂಧನೂರು ತಾಲ್ಲೂಕನ್ನು ಸೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಸಿಂಧನೂರು ತಾಲ್ಲೂಕನ್ನು ಯಾವಾಗ ಸೇರಿಸಲಾಗುವುದು;

ಈ) ಕಳೆದ 3 ವರ್ಷಗಳಿಂದ ರಾಯಚೂರು - ಥರ್ಮಲ್ ಘಟಕದಿಂದ ಉತ್ಪಾದನೆಯಾಗುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು; ವರ್ಷ ಮತ್ತು ತಿಂಗಳುವಾರು ವಿವರಗಳನ್ನು ನೀಡುವುದು?

ಉ) ಪ್ರಸ್ತುತ ಎಷ್ಟು ಥರ್ಮಲ್ ಘಟಕಗಳು ಕಾರ್ಯನಿರ್ವಹಿಸುತ್ತಿವೆ;